# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ ಮೂರನೇ ಹಂತದ ದೂತನೂರು ಕಾವಲ್ ಗ್ರಾಮದ ಬಳಿ ದಂಡಿಗನಹಳ್ಳಿ ಶಾಖಾ ನಾಲೆಯ ಕಿ.ಮೀ 17.725 ರಿಂದ ನೀರನ್ನು ಎತ್ತಿ ನೀರಾವರಿ ಕಲ್ಪಿಸುವ ವಿವರವಾದ ಯೋಜನಾ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

** ** **

***ಓದಲಾಗಿದೆ :-***

ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು, ಇವರ ಪತ್ರ ಸಂಖ್ಯೆ:ಕಾನೀನಿನಿ/ತಾಂತ್ರಿಕ-4/ಜೆ.ಇಂ-2/ಹೆಚ್.ಡಿ.ಡಿ.ಗೊರೂರು/401/Vol-V/2018-19/3492, ದಿನಾಂಕ:16-01-2019.

***ಪ್ರಸ್ತಾವನೆ :-***

ಮೇಲೆ ಓದಲಾದ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ ನಿಯಮಿತ, ಬೆಂಗಳೂರು, ಇವರು ಕಾಚೇನಹಳ್ಳಿ ಏತ ನೀರಾವರಿ ಯೋಜನೆಯನ್ನು ಚನ್ನರಾಯಪಟ್ಟಣ ತಾಲ್ಲೂಕಿನ ಕುಂಬೇನಹಳ್ಳಿ ಗ್ರಾಮದ ಹತ್ತಿರ ಹೇಮಾವತಿ ನದಿಯಿಂದ 0.73 ಟಿ.ಎಂ.ಸಿ ನೀರನ್ನು ಉಪಯೋಗಿಸಿಕೊಂಡು ಮೂರು ಹಂತಗಳಲ್ಲಿ ಖಾರೀಫ್ ಋತುವಿನಲ್ಲಿ ಒಟ್ಟು 12600 ಎಕರೆ (5100 ಹೆ.) ಅರೆ ಖುಷ್ಕಿ ಅಚ್ಚುಕಟ್ಟು ಪ್ರದೇಶಕ್ಕೆ ನೀರನ್ನು ಒದಗಿಸಲು ಯೋಜಿಸಲಾಗಿದೆ ಎಂದು ವರದಿ ಮಾಡಿರುತ್ತಾರೆ.

2. ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ ರೂ.165.00 ಕೋಟಿ ಮೊತ್ತದ ಪರಿಷ್ಕೃತ ಅಂದಾಜು ಪಟ್ಟಿಗೆ ಸರ್ಕಾರದ ಆದೇಶ ಸಂಖ್ಯೆ:ಜಸಂಇ 37 ಎನ್‌ಹೆಚ್‌ಪಿ 2007, ದಿನಾಂಕ:30-07-2007 ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಹಾಗೂ ಈ ಮಂಜೂರಾತಿಯು ಮೊದಲನೇ ಮತ್ತು ಎರಡನೇ ಹಂತದ ಏತ ನೀರಾವರಿ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಪೂರ್ಣಗೊಳಿಸುವ ಹಾಗೂ ಮೂರನೇ ಹಂತದ ಕಾಮಗಾರಿಗಳನ್ನು ನೀರಿನ ಲಭ್ಯತೆಯ ಮೇರೆಗೆ ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ ಎಂದು ವರದಿ ಸಲ್ಲಿಸಿರುತ್ತಾರೆ.

3. ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ 3ನೇ ಹಂತದಲ್ಲಿ ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ 2ನೇ ಹಂತದಲ್ಲಿ ಬರುವ ದೂತನೂರುಕಾವಲ್ ಗ್ರಾಮದ ಬಳಿ ದಂಡಿಗನಹಳ್ಳಿ ಶಾಖಾ ನಾಲೆಯ ಸರ:17.725 ಕಿ.ಮೀ ಯಿಂದ 0.267 ಟಿ.ಎಂ.ಸಿ ನೀರನ್ನು ಎತ್ತಿ ಹಾಸನ ಜಿಲ್ಲೆ, ಚನ್ನರಾಯಪಟ್ಟಣ ತಾಲ್ಲೂಕಿನ, ದಂಡಿಗನಹಳ್ಳಿ ಹೋಬಳಿ ಹಾಗೂ ಅರಸೀಕೆರೆ ತಾಲ್ಲೂಕಿನ ಗಂಡಸಿ ಹೋಬಳಿ ಅಡಿಯಲ್ಲಿ ಬರುವ ಒಟ್ಟು 4600 ಎಕರೆ (1862 ಹೆ.) ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಕಲ್ಪಿಸಲು ಉದ್ದೇಶಿಸಲಾಗಿದೆ. ಈ ಯೋಜನೆಯಿಂದ ಚನ್ನರಾಯಪಟ್ಟಣ ತಾಲ್ಲೂಕಿನ ಹಾಗೂ ಅರಸೀಕೆರೆ ತಾಲ್ಲೂಕಿನ 18 ಗ್ರಾಮಗಳು ನೀರಾವರಿ ಸೌಲಭ್ಯ ಪಡೆಯಲಿವೆ. ಸದರಿ ಪ್ರಸ್ತಾವನೆಯು ದಿನಾಂಕ:10-01-2019 ರಂದು ನಡೆದ ಕಾವೇರಿ ನೀರಾವರಿ ನಿಗಮದ 66ನೇ ಮಂಡಳಿಯ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.

4. ಈ ಹಿನ್ನೆಲೆಯಲ್ಲಿ, ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ ಮೂರನೇ ಹಂತದ ಕಾಮಗಾರಿಗಳ ರೂ.141.50 ಕೋಟಿಗಳ ಮೊತ್ತದ ವಿವರವಾದ ಯೋಜನಾ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆಯನ್ನು ನೀಡುವಂತೆ ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

5. ಸದರಿ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ : ಜಸಂಇ 2 ಎನ್‌ಹೆಚ್‌ಪಿ 2019,**
**ಬೆಂಗಳೂರು, ದಿನಾಂಕ : 28-02-2019**

ಕಾಚೇನಹಳ್ಳಿ ಏತ ನೀರಾವರಿ ಯೋಜನೆಯ ಮೂರನೇ ಹಂತದ ದೂತನೂರು ಕಾವಲ್ ಗ್ರಾಮದ ಬಳಿ ದಂಡಿಗನಹಳ್ಳಿ ಶಾಖಾ ನಾಲೆಯ ಕಿ.ಮೀ 17.725 ರಿಂದ 267 ಎಂ.ಸಿ.ಎಫ್.ಟಿ. ಗರಿಷ್ಠ ನೀರನ್ನು ಎತ್ತಿ ನೀರಾವರಿ ಕಲ್ಪಿಸುವ ರೂ.141.50 ಕೋಟಿ (ರೂಪಾಯಿ ಒಂದು ನೂರಾ ನಲವತ್ತೊಂದು ಕೋಟಿ ಐವತ್ತು ಲಕ್ಷಗಳು ಮಾತ್ರ) ಗಳ ಮೊತ್ತದ ಅಂದಾಜಿಗೆ ತಾತ್ವಿಕ ಅನುಮೋದನೆ ನೀಡಲಾಗಿದೆ ಮತ್ತು 2019-20ನೇ ಸಾಲಿನಲ್ಲಿ ಕಾಮಗಾರಿಯನ್ನು ರೂ.100.00 ಕೋಟಿಗಳ ಅಂದಾಜು ಮೊತ್ತಕ್ಕೆ ಸೀಮಿತಗೊಳಿಸಿ ಕೈಗೆತ್ತಿಕೊಳ್ಳುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ.

2. ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ:ಆಇ 60 ಆಕೋ-1/2019, ದಿನಾಂಕ:15-02-2019, ರಲ್ಲಿ ನೀಡಲಾದ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ
28/02/19

(ಬಿ.ಹರಿನಾರಾಯಣ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2)
ಜಲ ಸಂಪನ್ಮೂಲ ಇಲಾಖೆ.

ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-2),
ಜಲ ಸಂಪನ್ಮೂಲ ಇಲಾಖೆ,
ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ, ಬೆಂಗಳೂರು.

**ಇವರಿಗೆ :-**

1. ಪ್ರಧಾನ ಮಹಾಲೇಖಪಾಲರು, (ಸಾಮಾನ್ಯ ಮತ್ತು ಸಾಮಾಜಿಕ ವಲಯ ಲೆಕ್ಕಪರಿಶೋಧನ), ಕರ್ನಾಟಕ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕಾವೇರಿ ನೀರಾವರಿ ನಿಗಮ, ಬೆಂಗಳೂರು.
3. ಮುಖ್ಯ ಇಂಜಿನಿಯರ್, ಹೇಮಾವತಿ ಯೋಜನಾ ವಲಯ, ಗೊರೂರು.
4. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ಲೋ.ಇ. ಆರ್ಥಿಕ ಕೋಶ), ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ (ಸಚಿವ ಸಂಪುಟ), ಕರ್ನಾಟಕ ಸರ್ಕಾರ (ಪ್ರಕರಣ ಸಂಖ್ಯೆ:ಸಿ-134/2019, ದಿನಾಂಕ:25-02-2019).
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.